ವಿಷಯ:- ವಿದ್ಯಾರ್ಥಿನಿಯರ ಹಾಸ್ಟೆಲ್‌ಗಳ ಸಂಖ್ಯೆ.

1395 (2061) ಶ್ರೀ ಜಿ.ವಿ. ಶ್ರೀರಾಮರೆಡ್ಡಿ (ಬಾಗೇಪಲ್ಲಿ):- ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ವಿದ್ಯಾರ್ಥಿನಿಯರಿಗಾಗಿಯೇ ಇರುವ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು?

ಆ) ಈ ಹಾಸ್ಟೆಲ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು? ಕಡಿಮೆ ಸಂಖ್ಯೆಯಲ್ಲಿ ವಿದ್ಯಾರ್ಥಿನಿಯರು ಹಾಸ್ಟೆಲ್‌ಗಳಲ್ಲಿ ಇರಲು ಕಾರಣಗಳೇನು?

ಇ) ವಿದ್ಯಾರ್ಥಿನಿಯರ ಹಾಸ್ಟೆಲ್‌ಗಳಿಗೆ ಸೌಕರ್ಯಗಳನ್ನು ಹೆಚ್ಚಿಸಿ, ವಿದ್ಯಾರ್ಥಿನಿಯರು ಹೆಚ್ಚಿನ ಸಂಖ್ಯೆಯಲ್ಲಿ ಹಾಸ್ಟೆಲ್ ಸೇರುವಂತೆ ಮಾಡುವ ಉದ್ದೇಶ ಸರ್ಕಾರಕ್ಕಿದೆಯೇ?

ಶ್ರೀ ಕೆ.ಎಂ. ಕೃಷ್ಣಾರೆಡ್ಡಿ (ಸಮಾಜ ಕಲ್ಯಾಣ ಸಚಿವರು):-

ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗದ ವಿದ್ಯಾರ್ಥಿನಿಯರಿಗಾಗಿ 282 ವಿದ್ಯಾರ್ಥಿನಿಲಯಗಳು ಇರುತ್ತವೆ. ವಿವರ ಕೆಳಕಂಡಂತಿದೆ:-

1) ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು	245
2) ಅನುದಾನಿತ ವಿದ್ಯಾರ್ಥಿ ನಿಲಯಗಳು	15
3) ಕಾಲೇಜು ವಿದ್ಯಾರ್ಥಿ ನಿಲಯಗಳು	19
4) ಮಾನ್ಯತೆ ಪಡೆದ ಖಾಸಗಿ ಕಾಲೇಜು ವಿದ್ಯಾರ್ಥಿ ನಿಲಯಗಳು	3
	282

ಆ) ಈ ಹಾಸ್ಟೆಲ್‌ಗಳಲ್ಲಿ ಒಟ್ಟಾರೆ ಮಂಜೂರಾತಿ ಸಂಖ್ಯೆ 13,891 ವಿದ್ಯಾರ್ಥಿನಿಯರಿಗಾಗಿ ಇದ್ದು, ಪ್ರಸಕ್ತ ಸಾಲಿನಲ್ಲಿ 12,309 ವಿದ್ಯಾರ್ಥಿನಿಯರ ಸಂಖ್ಯೆ ಭರ್ತಿಯಾಗಿರುತ್ತದೆ. ಮಲೆನಾಡು ಪ್ರದೇಶದ ಜಿಲ್ಲೆಗಳಾದ ಕೊಡಗು, ದಕ್ಷಿಣ ಕನ್ನಡ, ಉತ್ತರ ಕನ್ನಡ ಜಿಲ್ಲೆಗಳಲ್ಲಿ ಶಾಲೆಗೆ ದಾಖಲಾಗುವ ಪ.ಜಾತಿ : ಪ.ವರ್ಗದ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆ ಆಗಿರುತ್ತದೆ.

ಇ) ಇದೆ. ವಿದ್ಯಾರ್ಥಿ ನಿಲಯಗಳಲ್ಲಿ ಪೂರ್ಣ ಸಂಖ್ಯೆಯಲ್ಲಿ ಪ್ರವೇಶ ಹೊಂದುವಂತೆ ಸೌಕರ್ಯಗಳನ್ನು ಕಲ್ಪಿಸುವುದಕ್ಕೆ ಕ್ರಮ ಕೈಗೊಳ್ಳಲಾಗಿದೆ. ವಿದ್ಯಾರ್ಥಿ ನಿಲಯಗಳಲ್ಲಿ ಹಾಲಿ ನೀಡುತ್ತಿರುವ ಊಟ, ತಿಂಡಿ, ಮತ್ತು ಇತರ ಸೌಲಭ್ಯಗಳನ್ನು ಹೆಚ್ಚಿಸಲು ಯೋಜಿಸಲಾಗುತ್ತಿದೆ. ಉತ್ತಮವಾದ ಬೋಧನೆಯನ್ನು ನೀಡುವ ಬಗ್ಗೆಯೂ ಸಹ ಏರ್ಪಾಟನ್ನು ಮಾಡಲಾಗುವುದು ಹಾಗೂ ಹೊಸ ವಿದ್ಯಾರ್ಥಿ ನಿಲಯಗಳನ್ನು ತೆರೆಯುವಾಗ ಶೇ. 30ರಷ್ಟು ವಿದ್ಯಾರ್ಥಿನಿಯರಿಗಾಗಿ ನಿಲಯಗಳನ್ನು ಕಡ್ಡಾಯವಾಗಿ ತೆರೆಯಲಾಗುತ್ತಿದೆ.

ವಿಷಯ:- ಮೈಸೂರ್ ಲ್ಯಾಂಪ್ಸ್ ಖಾಸಗೀಕರಣ

1397 (1749) ಶ್ರೀ ಜಿ.ವಿ. ಶ್ರೀರಾಮರೆಡ್ಡಿ (ಬಾಗೇಪಲ್ಲಿ):- ಮಾನ್ಯ ಬೃಹತ್ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆ ಹಾಗೂ ಸಂಪನ್ಮೂಲ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ